ಅಧ್ಯಕ್ಷರು : ಈಗ ಸಭೆಯು ಮುಕ್ತಾಯವಾಗಿ ಪುನಃ ಶುಕ್ರವಾರ ಬೆಳಿಗ್ಗೆ 10–30 ಗಂಟೆಗೆ ಸೇರುವುದು.

(ಸದನವು ಸಂಜೆ 6 ಗಂಟೆ 05 ನಿಮಿಸಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ : 25ನೇ ಜುಲೈ ಮಾಹೆ 2008ರ ಶುಕ್ರವಾರದಂದು ಬೆಳಿಗ್ಗೆ 10–30 ಗಂಟೆಗೆ ಸೇರಲು ನಿಶ್ಚಯಿಸಿತು)

(196) ಡಾ॥ ಬಗಲಿ ಸರ್ವಭೌಮ ಸಶಗೌಡ (ಇಂಡಿ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಆರೋಗ್ಯ ಇಲಾಖೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ (ಎಮ್.ಬಿ.ಬಿ.ಎಸ್. ಪದವೀಧರ) ವೈದ್ಯರ ಸಂಖ್ಯೆ ಎಷ್ಟು ;

ಆ) ಈ ಪೈಕಿ ಮೂರು ವರ್ಷ ಮತ್ತು ಅದಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದ ವೈದ್ಯರ ಸಂಖ್ಯೆ ಎಷ್ಟು ;

ಇ) ಮೂರು ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದ ಗುತ್ತಿಗೆ ವೈದ್ಯರನ್ನು ಖಾಯಂಗೊಳಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆಯೇ ;

ಈ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗಾಗಿ ಖಾಯಂ ಗೊಳಿಸಲಾಗುವುದು;

ಉ) ಇಲ್ಲದಿದ್ದಲ್ಲಿ, ಕಾರಣಗಳೇನು ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಆರೋಗ್ಯ ಇಲಾಖೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ (ಎಮ್.ಬಿ.ಬಿ.ಎಸ್. ಪದವೀಧರ) ವೈದ್ಯರ ಸಂಖ್ಯೆ 631.

ಆ) ಈ ಪೈಕಿ ಮೂರು ವರ್ಷ ಮತ್ತು ಅದಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದ ವೈದ್ಯರ ಸಂಖ್ಯೆ 448.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿರುವ ಕಾರಣ.